**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿದ ದಿನಾಂಕಃ 03.03.2022.**

**ಮುಖ್ಯ ವಿಚಾರಣೆಃ ಶ್ರೀ ಸಿ.ಎಮ್. ಅರ್ಜಿದಾರರ ಪರ ವಕೀಲರಿಂದಃ**

ನಾನು ಈ ಪ್ರಕರಣದಲ್ಲಿ ಅರ್ಜಿದಾರರಿದ್ದು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ. ಪ್ರಮಾಣ ಪತ್ರದಲ್ಲಿ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಪ್ರಮಾಣ ಪತ್ರಗಳಲ್ಲಿ ಕಂಡು ಬರುವ ಸಹಿ ನನ್ನದೆ ಇರುತ್ತದೆ.

ನಾನು ನನ್ನ ಮಗಳ ಜನನ ಪ್ರಮಾಣ ಪತ್ರ ಕೋರಿ ಅರ್ಜಿ ಸಲ್ಲಿಸಿದಾಗ ಎದುರುದಾರರು ನನ್ನ ಮಗಳ ಜನನದ ದಿನಾಂಕವು ಅವರ ದಾಖಲೆಗಳಲ್ಲಿ ನಮೂದು ಆಗಿರುವುದಿಲ್ಲ ಎಂದು ಅಲಭ್ಯ ಪ್ರಮಾಣ ಪತ್ರವನ್ನು ನೀಡಿರುತ್ತಾರೆ.

ನನ್ನ ಮಗಳು ದಿನಾಂಕಃ 05-12-2014 ರಂದು ಬೆಂಗಳೂರಿನ ನನ್ನ ಮನೆಯಲ್ಲಿ ಜನಿಸಿರುತ್ತಾನೆ. ನನ್ನ ಮಗಳ ಜನನ ಪ್ರಮಾಣ ಪತ್ರ ಶಾಲೆಗೆ ಸೇರಿಸುವ ಸಲುವಾಗಿ ಅವಶ್ಯ ಬೇಕಾಗಿರುತ್ತದೆ. ಆದ್ದರಿಂದ ನನ್ನ ಮಗಳ ಜನನದ ದಿನಾಂಕವನ್ನು ಸಂಬಂಧಪಟ್ಟ ದಾಖಲೆಗಳಲ್ಲಿ ನಮೂದು ಮಾಡಿ ನನಗೆ ನನ್ನ ಮಗಳ ಜನನ ಪ್ರಮಾಣ ಪತ್ರವನ್ನು ನೀಡುವಂತೆ ಎದುರುದಾರರಿಗೆ ಆದೇಶಿಸಲು ಕೋರುತ್ತೇನೆ.

**ನನ್ನ ಅರ್ಜಿಗೆ ಪೂರಕವಾಗಿಃ**

1. ಎದುರುದಾರ ಕಛೇರಿಯವರು ನೀಡಿದ ಅಲಭ್ಯ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-1** ಎಂದು ಗುರುತಿಸಲಾಯಿತು.

2. ನನ್ನ ಹಾಗೂ ನನ್ನ ಹೆಂಡತಿ ಬಾಬ್ತು ಆಧಾರ ಕಾರ್ಡ್‌ಗಳನ್ನು ಹಾಜರುಪಡಿಸಿದ್ದು ಈ ದಾಖಲೆಗಳನ್ನು ಹೋಲಿಕೆ ಮಾಡಿ ನೋಡಲಾಗಿ ದಾಖಲೆಗಳಲ್ಲಿನ ಸಂಗತಿಗಳು ಸರಿ ಇರುವ ಕಾರಣ ಅಸಲು ದಾಖಲೆಗಳನ್ನು ಸಾಕ್ಷಿದಾರರಿಗೆ ಹಿಂದುರುಗಿಸುತ್ತ ನೋಟರೈಜ್ಡ್ ನಕಲುಗಳನ್ನು **ನಿಪಿ-2 ಮತ್ತು ನಿಪಿ-3** ಎಂದು ಗುರುತಿಸಲಾಯಿತು.

3. ನನ್ನ ಮದುವೆಯ ನೋಂದಣಿ ಪ್ರಮಾಣಪತ್ರದ ದೃಡೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು **ನಿಪಿ-4** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ ಶ್ರೀಮತಿ ಜಿ ಬಿ ವಕೀಲರಿಂದ ಎದುರುದಾರರ ಪರವಾಗಿಃ**

**ನಿಪಿ-1 ರಿಂದ ನಿಪಿ-4** ರ ದಾಖಲೆಗಳನ್ನು ನಾನೇ ಸೃಷ್ಟಿ ಮಾಡಿಕೊಂಡು ತಂದು ಹಾಜರುಪಡಿಸಿದ್ದೇನೆ ಅಂದರೆ ಸರಿಯಲ್ಲ. ನನ್ನ ಮಗಳು ಬೆಂಗಳೂರಿನಲ್ಲಿ ಹುಟ್ಟಿಲ್ಲ ಅಂದರೆ ಸರಿಯಲ್ಲ. ನಾನು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**
**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇ ಎ ಒ,**

**13ನೇ ಅ ಮು ಮ ದಂ ನ್ಯಾ.**